ಔರಾದ್ ತಾಲ್ಲೂಕಿನಲ್ಲಿ ದೋಣಗಾವ ಎಂಬಲ್ಲಿ ಒಂದು ವೇವು ಬ್ಯಾಂಕನ್ನು ಮತ್ತು ೫೦೦ ಜಾನುವಾರುಗಳುಳ್ಳ ಒಂದು ಗೋಶಾಲೆಯನ್ನು ತೆರೆಯಲಾಗಿದೆ. ಬಾಧಿತ ಜನತೆಗೆ ತತ್‌ಕ್ಷಣದ ಪರಿಹಾರ ಒದಗಿಸುವ ದಿಸೆಯಲ್ಲಿ ಸರಕಾರವು ಬದ್ಧವಾಗಿದೆ.

ಶಾಸನ ರಚನೆ

ವಿಧೇಯಕಗಳ ಮಂಡನೆ

1987ನೇ ಇಸವಿಯ ಕರ್ನಾಟಕ ವಿಧಾನಮಂಡಲದ ಸಂಬಳ, ನಿವೃತ್ತಿವೇತನ ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ. ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ಎ. ಲಕ್ಷ್ಮೀಸಾಗರ್(ಕಾನೂನು ಸಂಸದೀಯ ವ್ಯವಹಾರಗಳು, ನಗರಾಭಿವೃದ್ಧಿ ಆಹಾರ ಮತ್ತು ನಾಗರೀಕ ಸರಬರಾಜು ಮಂತ್ರಿಗಳು) —ಮಾನ್ಯ ಅಧ್ಯಕ್ಷರೇ, ೧೯೮೭ನೇ ಇಸವಿಯ ಕರ್ನಾಟಕ ವಿಧಾನಮಂಡಲದ ಸಂಬಳ, ನಿವೃತ್ತಿ ವೇತನ ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ, ''೧೯೮೭ನೇ ಇಸವಿಯ ಕರ್ನಾಟಕ ವಿಧಾನಮಂಡಲದ ಸಂಬಳ, ನಿವೃತ್ತಿ ವೇತನ ಮತ್ತು ಭತ್ಯಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಎ. ಲಕ್ಷ್ಮೀಸಾಗರ್(ಕಾನೂನು, ಸಂಸದೀಯ ವ್ಯವಹಾರಗಳು, ನಗರಾಭಿವೃದ್ಧಿ ಆಹಾರ ಮತ್ತು ನಾಗರೀಕ ಸರಬರಾಜು ಮಂತ್ರಿಗಳು).—ಮಾನ್ಯ ಅಧ್ಯಕ್ಷರೇ, ೧೯೮೭ನೇ ಇಸವಿಯ ಕರ್ನಾಟಕ ವಿಧಾನಮಂಡಲದ ಸಂಬಳ, ನಿವೃತ್ತಿ ವೇತನ ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಗಿದೆ. *

1987ನೇ ಇಸವಿಯ ಕರ್ನಾಟಕ ಸಚಿವರುಗಳ ಸಂಬಳ ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು, ಸಂಸದೀಯ ವ್ಯವಹಾರಗಳು, ನಗರಾಭಿವೃದ್ಧಿ, ಆಹಾರ ಮತ್ತು ನಾಗರೀಕ ಸರಬರಾಜು ಮಂತ್ರಿಗಳು).—ಮಾನ್ಯ ಅಧ್ಯಕ್ಷರೆ, ೧೯೮೭ನೇ ಇಸವಿಯ ಕರ್ನಾಟಕ ಸಚಿವರುಗಳ ಸಂಬಳ ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ,

"೧೯೮೭ನೇ ಇಸವಿಯ ಕರ್ನಾಟಕ ಸಚಿವರುಗಳ ಸಂಬಳ ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

---

* ANNEXURE